# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಶಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ______ ದಿನಾಂಕ : DATE : 22/5/2020

## ಕಸ್ತೂರಿ ರಂಗನ್ ಜಾರಿ ಬೇಡ

**ಅಧಿಸೂಚನೆಗೆ ಸಿಎಂ ಬಿಎಸ್‌ವೈ ಆಕ್ಷೇಪ**

**ಪ್ರತ್ಯೇಕ ಚರ್ಚೆ ನಡೆಸುವುದಾಗಿ ಪ್ರಕಾಶ್ ಜಾವಡೇಕರ್ ಭರವಸೆ**

**ಬೆಂಗಳೂರು:** ಪಶ್ಚಿಮ ಘಟ್ಟ ಸಂರಕ್ಷಣೆ ಕುರಿತಂತೆ ಕಸ್ತೂರಿ ರಂಗನ್ ವರದಿ ಅಧಿಸೂಚನೆ ಜಾರಿಗೆ ಸಿಎಂ ಬಿ.ಎಸ್. ಯಡಿಯೂರಪ್ಪ ವಿರೋಧ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎಲ್ಲ ರಾಜ್ಯಗಳೊಂದಿಗೆ ಪ್ರತ್ಯೇಕವಾಗಿ ಚರ್ಚಿಸುವುದಾಗಿ ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ಭರವಸೆ ನೀಡಿದ್ದಾರೆ.

ಡಾ.ಕಸ್ತೂರಿ ರಂಗನ್ ವರದಿ ಜಾರಿ ಕುರಿತಂತೆ ಪಶ್ಚಿಮ ಘಟ್ಟವನ್ನು ಸೂಕ್ಷ್ಮ ಪರಿಸರ ಪ್ರದೇಶವೆಂದು ಘೋಷಿಸುವ ಬಗ್ಗೆ ಕೇಂದ್ರ ಪರಿಸರ ಸಚಿವ ಪ್ರಕಾಶ್ ಜಾವಡೇಕರ್ ಅವರು ಕರ್ನಾಟಕ, ಮಹಾರಾಷ್ಟ್ರ, ಕೇರಳ, ಗೋವಾ, ತಮಿಳುನಾಡು, ಗುಜರಾತ್ ಸಿಎಂಗಳ ಜತೆ ಗುರುವಾರ ವಿಡಿಯೋ ಸಂವಾದ ನಡೆಸಿದರು.

ವಿಡಿಯೋ ಸಂವಾದದಲ್ಲಿ ಮಾತನಾಡಿದ ಸಿಎಂ ಬಿ.ಎಸ್.ಯಡಿಯೂರಪ್ಪ, ರಾಜ್ಯದಲ್ಲಿ ಗ್ರಾಮ ಪಂಚಾಯ್ತಿಗಳು, ತಾಲ್ಲೂಕು ಪಂಚಾಯ್ತಿಗಳು, ಜಿಲ್ಲಾ ಪಂಚಾಯ್ತಿಗಳು, ನಾನಾ ಹಂತಗಳ ಜನಪ್ರತಿನಿಧಿಗಳು, ಸಚಿವ ಸಂಪುಟವು ಕಸ್ತೂರಿರಂಗನ್ ವರದಿಯ ಕರಡು ಅಧಿಸೂಚನೆಯನ್ನು ಈಗಿರುವ ರೂಪದಲ್ಲಿ ತಿರಸ್ಕರಿಸಿದೆ. ▶ 6ನೇ ಪುಟಕ್ಕೆ

## ಕಸ್ತೂರಿ ರಂಗನ್ ಜಾರಿ ಬೇಡ

**1ನೇ ಪುಟದಿಂದ** ▶ ಆದರಲ್ಲೂ ಸೂಕ್ಷ್ಮ ಪರಿಸರ ಪ್ರದೇಶವೆಂದು ಘೋಷಿಸಿರುವುದನ್ನು ತಿರಸ್ಕರಿಸಲಾಗಿದೆ. ಪ್ರತಿಯೊಂದು ರಾಜ್ಯದ ಸಮಸ್ಯೆಗಳು, ಸವಾಲುಗಳು ವಿಭಿನ್ನವಾಗಿರುತ್ತವೆ. ಹಾಗಾಗಿ ಕೇಂದ್ರ ಸರ್ಕಾರ ಎಲ್ಲ ರಾಜ್ಯಗಳಿಗೆ ಏಕರೂಪದ ಅಧಿಸೂಚನೆ ಹೊರಡಿಸುವುದು ಸರಿಯಲ್ಲ ಎಂದು ಯಡಿಯೂರಪ್ಪ ಸ್ಪಷ್ಟವಾಗಿ ಪ್ರತಿಪಾದಿಸಿದರು. ಇದಕ್ಕೆ ಸಹಮತ ವ್ಯಕ್ತಪಡಿಸಿದ ಪ್ರಕಾಶ್ ಜಾವಡೇಕರ್ ಅವರು ಪ್ರತಿಯೊಂದು ರಾಜ್ಯಕ್ಕೆ ಸಂಬಂಧಪಟ್ಟ ವಿಷಯಗಳನ್ನು ಪ್ರತ್ಯೇಕವಾಗಿ ಆಯಾ ರಾಜ್ಯಗಳೊಂದಿಗೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು ಎಂದು ಮುಖ್ಯಮಂತ್ರಿಗಳ ಸಚಿವಾಲಯ ಮೂಲಗಳು ತಿಳಿಸಿವೆ.

**ಯಡಿಯೂರಪ್ಪ ಸಲಹೆ:** ವಿಡಿಯೋ ಸಂವಾದದ ವೇಳೆ ಹಿರಿಯರಾದ ಬಿ.ಎಸ್.ಯಡಿಯೂರಪ್ಪ ಅವರೇ ಮೊದಲಿಗೆ ಮಾತನಾಡಿದರು. ಪಶ್ಚಿಮ ಘಟ್ಟ ಶ್ರೇಣಿ ಸಂರಕ್ಷಣೆಗೆ ಸಂಬಂಧಪಟ್ಟಂತೆ ಏಕರೂಪದ ಅಧಿಸೂಚನೆ ಸರಿಯಲ್ಲ. ರಾಜ್ಯದಲ್ಲಿ ಪಶ್ಚಿಮ ಘಟ್ಟವನ್ನು ಸೂಕ್ಷ್ಮ ಪರಿಸರ ಪ್ರದೇಶವೆಂದು ಘೋಷಿಸುವುದರಿಂದ ಸಾವಿರಾರು ಜನರ ಜೀವನವೇ ಏರುಪೇರಾಗುತ್ತದೆ. ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳದೆ ಏಕರೂಪದ ಅಧಿಸೂಚನೆ ಹೊರಡಿಸಿದರೆ ಪ್ರಯೋಜನವಾಗದು. ಹಾಗಾಗಿ ಮೊದಲಿಗೆ ರಾಜ್ಯಗಳ ಸಮಸ್ಯೆಯನ್ನು ಪ್ರತ್ಯೇಕವಾಗಿ ಆಲಿಸಿ ಪರಿಶೀಲಿಸುವುದು ಒಳಿತು ಎಂದು ಯಡಿಯೂರಪ್ಪ ಸಲಹೆ ನೀಡಿದರು ಎನ್ನಲಾಗಿದೆ.

**ಎಲ್ಲರಿಂದಲೂ ವಿರೋಧ:** ಡಾ.ಕಸ್ತೂರಿ ರಂಗನ್ ಸಮಿತಿ ವರದಿಗೆ ಸಂಬಂಧಪಟ್ಟಂತೆ ಕೇಂದ್ರ ಸರ್ಕಾರ 2014ರಲ್ಲಿ ಮೊದಲ ಕರಡು ಅಧಿಸೂಚನೆ ಹೊರಡಿಸಿತ್ತು. ನಂತರ 2015 ಹಾಗೂ 2017ರಲ್ಲಿ ಕರಡು ಅಧಿಸೂಚನೆ ಪ್ರಕಟವಾಗಿತ್ತು. ಆದರೆ ಆ ಪ್ರದೇಶದ ಜನರ ತೀವ್ರ ವಿರೋಧ, 1553 ಗ್ರಾಮಗಳಿಗೆ ಮಾರಕವಾಗುವ ಕಾರಣಕ್ಕೆ ಹಿಂದೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಿರಸ್ಕರಿಸಿತ್ತು. ನಂತರದ ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರ ಹಾಗೂ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಸರ್ಕಾರ ಕೂಡ ವರದಿಗೆ ಸಮ್ಮತಿ ಇಲ್ಲ ಎಂದು ಪ್ರಕಾಶ್ ಜಾವಡೇಕರ್ ಅವರಿಗೆ ಪತ್ರ ಬರೆದಿದ್ದನ್ನು ಸ್ಮರಿಸಬಹುದು.